**ಕರ್ನಾಟಕ ಸರ್ಕಾರ**

ಇ-ಕಛೇರಿ ಸಂ: ಇಡಿ/302/ಯುಬಿವಿ/2023

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:09.01.2024

**ಇಂದ**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು

**ಇವರಿಗೆ**

ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಜ್ಞಾನಭಾರತಿ ಆವರಣ,
ಬೆಂಗಳೂರು.

**ವಿಷಯ**: ಬೆಂಗಳೂರು ವಿಶ್ವವಿದ್ಯಾಲಯದ ಶ್ರೀ ಸಿದ್ದಗಂಗಾ ಕಲೆ ಮತ್ತು ವಾಣಿಜ್ಯ ಕಾಲೇಜು ಇಲ್ಲಿಗೆ 2023-24ನೇ ಶೈಕ್ಷಣಿಕ ಸಾಲಿಗೆ ಶಾಶ್ವತ ಸಂಯೋಜನೆ ನೀಡುವ ಕುರಿತು.

**ಉಲ್ಲೇಖ**:-

1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021, ದಿನಾಂಕ: 16.02.2021.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ/384/ಯುಎನ್ಇ/ 2020, ದಿನಾಂಕ: 18.02.2022.
3. ತಮ್ಮ ಪತ್ರ ಸಂಖ್ಯೆ: ಎಸಿಎ-3/ಎ3/ಶಾ.ಸಂ.ಪ್ರ.77/2023 - 24 ದಿನಾಂಕ:15.07.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ. **ಶ್ರೀ ಸಿದ್ದಗಂಗಾ ಎಜುಕೇಷನ್ ಸೊಸೈಟಿ, ತುಮಕೂರು** ವತಿಯಿಂದ ನಡೆಸಲಾಗುತ್ತಿರುವ ***ಶ್ರೀ ಸಿದ್ದಗಂಗಾ ಕಲೆ ಮತ್ತು ವಾಣಿಜ್ಯ ಕಾಲೇಜು, ನೆಲಮಂಗಲ-562 123 ಬೆಂಗಳೂರು ಗ್ರಾಮಾಂತರ ಜಿಲ್ಲೆ,*** ಇಲ್ಲಿ 2023-24ನೇ ಸಾಲಿನಿಂದ ಅಸ್ತಿತ್ವದಲ್ಲಿರುವ ***ಬಿ.ಎ. (ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಭೂಗೋಳಶಾಸ್ತ್ರ)*** *ಕೋರ್ಸಿಗೆ ಹೊಸದಾಗಿ ಶಾಶ್ವತ ಸಂಯೋಜನೆ ಕೋರಿ* ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 62(1) ರಡಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್ / ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ ಉಲ್ಲೇಖ (3) ರ ತಮ್ಮ ಪತ್ರದ ಮೂಲಕ, UUCMS ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಸಂವೀಕ್ಷಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್ ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ

ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 384 ಯುಎನ್‌ಇ 2020, ದಿನಾಂಕ: 18.02.2022ರನ್ವಯ ಅಗತ್ಯ ಪ್ರಮಾಣದ ಜಮೀನಿನ ದಾಖಲಾತಿಗಳನ್ನು ದೃಢಪಡಿಸಿಕೊಂಡು ಪ್ರಸ್ತಾವನೆಯನ್ನು ಪರಿಗಣಿಸಲಾಗಿದೆ.

ಆದುದರಿಂದ, **ಶ್ರೀ ಸಿದ್ಧಗಂಗಾ ಎಜುಕೇಷನ್ ಸೊಸೈಟಿ, ತುಮಕೂರು** ವತಿಯಿಂದ ನಡೆಸಲಾಗುತ್ತಿರುವ ***ಶ್ರೀ ಸಿದ್ಧಗಂಗಾ ಕಲೆ ಮತ್ತು ವಾಣಿಜ್ಯ ಕಾಲೇಜು, ನೆಲಮಂಗಲ-562 123 ಬೆಂಗಳೂರು ಗ್ರಾಮಾಂತರ ಜಿಲ್ಲೆ, ನ್ಯಾಕ್ 'ಬಿ' ದರ್ಜೆ*** ಇಲ್ಲಿ 2023-24ನೇ ಸಾಲಿನಿಂದ *ಕೆಳಕಂಡಂತೆ* ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 62(1)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

**ಶಾಶ್ವತ ಸಂಯೋಜನಾ ನವೀಕರಣ ಕೋರ್ಸ್**

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಎ. | ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಭೂಗೋಳಶಾಸ್ತ್ರ | 300 |

ಬೆಂಗಳೂರು ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಶೈಕ್ಷಣಿಕ ಪರಿಷತ್ ಮತ್ತು ಸಿಂಡಿಕೇಟ್‌ನ ನಿರ್ಣಯಗಳನ್ನು ಅನುಸರಿಸಿ ಹಾಗೂ ನ್ಯಾಕ್ ಮಾನ್ಯತೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಉಲ್ಲೇಖಿತ ಪತ್ರದನ್ವಯ ಸಲ್ಲಿಸಲಾದ ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000 ರ ಪ್ರಕರಣ 62(1)ರ ಉಪಬಂಧಗಳನುಸಾರ ಸಮಗ್ರವಾಗಿ ಸಂವೀಕ್ಷಿಸಿ, ಪರಿಗಣಿಸಲಾಗಿದೆ.

**ಶ್ರೀ ಸಿದ್ಧಗಂಗಾ ಎಜುಕೇಷನ್ ಸೊಸೈಟಿ, ತುಮಕೂರು** ವತಿಯಿಂದ ನಡೆಸಲಾಗುತ್ತಿರುವ ***ಶ್ರೀ ಸಿದ್ಧಗಂಗಾ ಕಲೆ ಮತ್ತು ವಾಣಿಜ್ಯ ಕಾಲೇಜು, ನೆಲಮಂಗಲ-562 123 ಬೆಂಗಳೂರು ಗ್ರಾಮಾಂತರ ಜಿಲ್ಲೆ, ನ್ಯಾಕ್ 'ಬಿ' ದರ್ಜೆ*** ಇಲ್ಲಿ 2023-24ನೇ ಸಾಲಿನಿಂದ 04 ವರ್ಷಗಳ ಅವಧಿಗೆ *ಶಾಶ್ವತ ಸಂಯೋಜನೆಗೆ* **ಬಿ.ಎ. *(ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಭೂಗೋಳಶಾಸ್ತ್ರ) ಒಟ್ಟಾರೆ 300 (ಮೂನ್ನೂರು)*** ಇಲ್ಲಿ 2023-24ನೇ ಸಾಲಿನಿಂದ ಶಾಶ್ವತ ಸಂಯೋಜನಾ ನವೀಕರಣವನ್ನು ನೀಡಲಾಗಿರುವ ಸರ್ಕಾರದ ಪೂರ್ವೋಕ್ತ ಷರತ್ತುಗಳು ಹಾಗೂ ಸ್ಥಳೀಯ ವಿಚಾರಣೆ ಸಮಿತಿಯ ಹಾಗೂ ಕೆಳಕಂಡ ಷರತ್ತುಗಳ ಪಾಲನೆಗೆ ಒಳಪಟ್ಟಿರುತ್ತದೆ:-

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

-3

2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ
5. ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
6. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು
7. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;
8. ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;
9. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;
10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;
12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
13 ಶೈಕ್ಷಣಿ/ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣ ಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ನಿಗದಿ ಪಡಿಸಲಾದ ಸೂಚ್ಯಾಂಕಗಳ ಪೈಕಿ ಪಾಲನೆಯಾಗದ ಸೂಚ್ಯಾಂಕಗಳನ್ನು 6 ತಿಂಗಳ ಒಳಗಾಗಿ ಪೂರೈಸತಕ್ಕದ್ದು.
14 ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 59 ರಲ್ಲಿನ ಮಾನದಂಡಗಳು ಹಾಗೂ ಸಂಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಸಂಬಂಧಿಸಿದ ಕಾಲೇಜು

-4

ಪಾಲಿಸಿವೆಯೇ ಎಂಬುದರ ಕುರಿತಾಗಿ ವಿಶ್ವವಿದ್ಯಾಲಯವು ಖಚಿತಪಡಿಸಿಕೊಳ್ಳತಕ್ಕದ್ದು. ತಪ್ಪಿದಲ್ಲಿ ವಿಶ್ವವಿದ್ಯಾಲಯವು ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ: 12.02.2021, ಇಡಿ 218 ಯುಎನ್ಇ 2020, ದಿನಾಂಕ: 24.08.2022 ರಲ್ಲಿನ ಷರತ್ತುಗಳನ್ನು (06) ಆರು ತಿಂಗಳೊಳಗೆ ಪೂರೈಸುವ ಷರತ್ತಿಗೊಳಪಟ್ಟಿದೆ.

ತಮ್ಮ ನಂಬುಗೆಯ,

(ನಂದಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2).

**ಪ್ರತಿ:**
1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು-560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಪ್ರಾಂಶುಪಾಲರು, ***ಶ್ರೀ ಸಿದ್ಧಗಂಗಾ ಕಲೆ ಮತ್ತು ವಾಣಿಜ್ಯ ಕಾಲೇಜು, ನೆಲಮಂಗಲ-562 123 ಬೆಂಗಳೂರು ಗ್ರಾಮಾಂತರ ಜಿಲ್ಲೆ.***
4. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ (ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)

TRUE TRANSLATION OF ENGLISH

KARNATAKA STATE

E-OFFICE NO. ED/302/UBV/2023

Karnataka Government Ministry
MS Building, Bangalore.
Date: 09-01-2024

From
Principle Secretary to Government
Higher Education Department
MS Building.

To
Registrar
Bangalore University
Jnanabharathi Campus, Bangalore

Subject: Sri Siddaganga College of Arts and Commerce, Affiliated to Bangalore University regarding grant of permanent affiliation for the academic year 2023-24.

Ref: 1. Government order number ED/29/UNE/2021, Date 12-02-2021 dated 16-03-2021
2. Government circular number ED/384/UNE/2020,90: 18-02-2022
2. Your letter number ACA-3/A3/Per. Affi. Let/77/2023-24 date 15-07-2023

In connection with the above matter, their attention is drawn to the letters referred to Sri Siddaganga College of Arts and Commerce, Nelamangala – 562123. Bangalore Rural District, run by Sri Siddaganga Education Society, Tumkur, where the existing B.A. Article 62(1) of the Karnataka State Universities Act. 2000. Seeking new permanent inclusion of History, Economics, Political Science and Geography courses under section 62(A) of Karnataka State Universities Act. 2000. Application of existing college report, LIC enquiry report, resolutions of syndicate / academic council reference 3 through their letter UUCMS proposal submitted in the online data base is thoroughly reviewed.

Observations and conclusions of local enquiry committee in accordance with the directives passed by the syndicated authorities and for ensuring the availability and quality functioning of educational / physical and civic infrastructure (1) of government.

The proposal has been considered by confirming the supply of parameters and indexes as prescribed in the order and confirming the documentation of the required amount of land vide government circular number ED/384/UNE/2020 dated 18-02-2022.

Therefore Sri Siddaganga College of Arts and Commerce, Nelamangala – 562123, Bangalore Rural District, NAAC 'B' Grade run by Sree Siddaganga Education Society (R), Tumkur is hereby empowered under section 62 (1) of the Karnataka State Universities act 2000. As follows : I am directed to informed you that the exercise as been recommended.

Permanent Combination Renewal Course.

| Course | Subject | Student Rate |
|---|---|---|
| BA | History, Economics, Political Science, Geography | 300 |

Pursuant to the report of the Local Inquiry Committee of Bangalore University and the resolutions of the Academic Council and Syndicate and the NAAC has submitted a certificate of recognition. The proposal submitted in the reference letter has been thoroughly reviewed and considered in accordance with the provisions of Section 62(1) of the Karnataka State University Act, 2000.

Sri Siddaganga College of Arts and Commerce, Nelamangala – 562123, Bangalore Rural District. NAAC 'B' Grade, run by Sree Siddaganga Education Society, Tumkur is offering B.A. (History, Economics, Political Science, Geography) in total 300 (three hundred) are hereby granted permanent combination renewal from the year 2023-24 subject to the aforesaid conditions of the Government and Local Inquiry Committee and the observance of the following conditions.

1) The government shall not sanction any grant for the above courses of the college not with standing any provisions in the grants code applicable to the colleges. It shall not be treated as permanent Un-Aided courses.

2) The provisions of the above College University Regulations shall be strictly followed;
3) Admission of students in excess of prescribed student quota Not to be done;
4) Existing government order and regulations should be followed.
5) Rules, Orders, Regulations, Rules etc. of the University Government in force Must be strictly followed;
6) Every condition imposed by the Local Inquiry Committee shall be strictly observed College/Governing Board 50% University Quota
7) (wherever applicable) prescribed by the rules of the University; and shall charge only such fee as may be fixed by the University from time to time and shall not charge an amount in excess of the fee/amount fixed by the University;
8) On Vishakha Other High v/s Rajasthan Govt. Date: 13-8-1997 Pursuant to the judgment given by the Supreme Court in the suit, any person/student causing riot or sexually harassing women in the college is considered a cognizable offense and cancellation of admission of the student/person engaged in such activities; and legal action shall be taken against that person/student; Further, the College/Governing Board shall constitute a Grievance Committee as per the order of the Supreme Court; Actions should be taken to control such activities;
9) The College shall conduct a good course for the development of the students; The Principal/Governing Board of the College shall treat the student/teaching staff as cordial;
10) The Board of Governors of the College shall not unduly withhold the transcript or records of any student until the admission of the said student is approved by the University or beyond a period of 6 months, whichever is earlier;
11) Capitation fee shall not be received in any form;
12) Roster system should be strictly followed in admission.
13) Among the indices prescribed for ensuring availability of educational/physical and civic infrastructure and quality level performance, non-observed indices should be met within 6 months.
14) In relation to the norms and composition in section 59 of the Karnataka State Universities Act 2000, the College concerned the orders and circulars issued by the Govt. The University shall ensure compliance. The university will be fully responsible for the error.

Government Order No: ED 29 UNE 2021, Dated: 12.02.2021, 0 218 a 2020, 90: 24.08.2022 Condition (06) is conditioned to be fulfilled within six months.

of their faith,

Sd/-
(Nanda Kumar B.)
Under Secretary to Government
Higher Education Department (Universities-2)

Copy to:

1) The Commissioner, Department of College and Technical Education, Bangalore-560 001.
2) Regional Joint Director, Department of College Education, Bangalore.
3) Private Secretary to Hon'ble Minister of Higher Education, Vikasasoudha, Bangalore.
4) The Principal, Sri Siddaganga College of Arts and Commerce, Nelamangala- 562 123 Bangalore Rural Distt.
5) To the e-Coordinator, Higher Education Department (to be published on the website of the Higher Education Department)

Duly attested by me

PRINCIPAL
SREE SIDDAGANGA COLLEGE OF
ARTS & COMMERCE,
Nelamangala
Bangalore Rural Dist. 562 123.

## ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಸಂ.ನ/SSCAC/2023-24

ಜ್ಞಾನಭಾರತಿ
ಬೆಂಗಳೂರು-560 056
**ದಿನಾಂಕ: 12-09-2023**

## ಅಧಿಸೂಚನೆ

SREE SIDDAGANGA ARTS & COMMERCE COLLEGE
No 45/2023-24
Date 22/9/2023
NELAMANGALA

**ವಿಷಯ : 2023-24ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.**

**ಉಲ್ಲೇಖ:** 1. ವಿಶ್ವವಿದ್ಯಾಲಯದ ಅಧಿಸೂಚನೆ ಸಂಖ್ಯೆ: ಎಸಿಎ-3:ಸಂ.ನ: 2023-24 ದಿನಾಂಕ: 15-05-2023.
2. ಕುಲಪತಿಯವರ ಅನುಮೋದನೆ ದಿನಾಂಕ: 11-09-2023.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ **2000**ದ **59**ನೇ ಪ್ರಕರಣದ **17**ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು, **2023-24**ನೇ ಸಾಲಿಗೆ **ನೆಲಮಂಗಲದ ಶ್ರೀ ಸಿದ್ದಗಂಗಾ ಕಲೆ ಮತ್ತು ವಾಣಿಜ್ಯ ಕಾಲೇಜು,** ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| **ಕೋರ್ಸು** ***(Programme)*** | **ವಿಷಯ, ಶಿಸ್ತಿನ/ಮೂಲ ವಿಷಯಗಳು** ***( Subject, Discipline / Core subjects)*** | ***Programme*** ***ಆಧಾರಿತ ವಿದ್ಯಾರ್ಥಿ ಪ್ರಮಾಣ*** |
|---|---|---|
| **ಬಿ.ಎ.** | **ಇತಿಹಾಸ**<br>**ಅರ್ಥಶಾಸ್ತ್ರ**<br>**ರಾಜ್ಯಶಾಸ್ತ್ರ**<br>**ಭೂಗೋಳಶಾಸ್ತ್ರ** | **ಒಟ್ಟಾರೆ 300 (ಮುನ್ನೂರು)** |
| **ಬಿ.ಕಾಂ.** | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | **160 (ಒಂದು ನೂರ ಅರವತ್ತು)** |
| **ಭಾಷೆಗಳು:** ಕನ್ನಡ ಮತ್ತು ಆಂಗ್ಲ | | |

*ಉಲ್ಲೇಖ(1)ರ ವಿಶ್ವವಿದ್ಯಾಲಯದ ಅಧಿಸೂಚನೆಯಲ್ಲಿ ತಿಳಿಸಲಾಗಿರುವಂತೆ, ಕೋರ್ಸುಗಳ ವಿದ್ಯಾರ್ಥಿ ಪ್ರಮಾಣವನ್ನು Discipline or Core subjects ಆಧಾರದ ಬದಲಾಗಿ Programme ಆಧಾರಿತ ವಿದ್ಯಾರ್ಥಿ ಪ್ರಮಾಣವೆಂದು ನಿಗದಿಪಡಿಸಲಾಗಿರುತ್ತದೆ.*

***ವಿ.ಸೂ:*** ***2023-24ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಗದಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.***

22/9/2023

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.

2. ***ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021 ದಿನಾಂಕ: 12-02-2021ರಲ್ಲಿ ಸೂಚಿಸಿರುವಂತೆ ಕಾಲೇಜುಗಳು ಮುಂದಿನ ಎರಡು ವರ್ಷಗಳ ಒಳಗಾಗಿ ಸ್ಥಳೀಯ ವಿಚಾರಣ ಸಮಿತಿಯ ವರದಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಎಂಟು Defined Parameters ಗಳನ್ನು ಪೂರೈಸಲು ಕ್ರಮವಹಿಸತಕ್ಕದ್ದು.***

3. **ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.**

4. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.

5. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.

6. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

7. Open electiveಗೆ ಸಂಬಂಧಪಟ್ಟ ಹಾಗೆ, ಪ್ರತಿ ಸಂಯೋಜಿತ ಕಾಲೇಜಿನ, ಒಟ್ಟು ಅನುಮೋದಿತ ಕೋರ್ಸ್-ಕಾಂಬಿನೇಷನ್‌ಗಳಲ್ಲಿನ ಪ್ರತಿ ವಿಷಯದ ವಿದ್ಯಾರ್ಥಿ ಪ್ರಮಾಣ (Intake) ಪ್ರಸ್ತುತ ಅನುಮೋದಿತ ವಿದ್ಯಾರ್ಥಿ ಪ್ರಮಾಣದ 50% ಮೀರದಂತೆ ಕ್ರಮ ವಹಿಸುವುದು.

8. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

9. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗಧಿಪಡಿಸುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

10. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

11. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

12. ವಿದ್ಯಾರ್ಥಿಗಳು ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

13. ಕಾಲೇಜು ವಿದ್ಯಾರ್ಥಿಗಳ ಅಂಕಪಟ್ಟಿ, ಪದವಿ ಪ್ರಮಾಣ ಪತ್ರ ಹಾಗೂ ಇತರೇ ದಾಖಲೆಗಳನ್ನು ಮೂರು ತಿಂಗಳ ಅವದಿಯೊಳಗೆ ವಿದ್ಯಾರ್ಥಿಗಳಿಗೆ ನೀಡಬೇಕು. ಅವಧಿ ಮೀರಿದ ನಂತರ ತಮ್ಮಲ್ಲಿಯೇ ಉಳಿದುಕೊಂಡಿರುವ ಅಂಕಪಟ್ಟಿಗಳು ಮತ್ತು ಪದವಿ ಪ್ರಮಾಣ ಪತಗಳ ಬಗ್ಗೆ ಕುಲಸಚಿವರು (ಮೌಲ್ಯಮಾಪನ) ಇವರಿಗೆ ವರದಿ ನೀಡತಕ್ಕದ್ದು.

14. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಭೋದನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

15. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

16. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

17. **2024-25**ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

18. ***ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.***

19. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆದೇಶದ ಮೇರೆಗೆ

**ಕುಲಸಚಿವರು**

ಗೆ,

**ಪ್ರಾಂಶುಪಾಲರು,**
**ಶ್ರೀ ಸಿದ್ದಗಂಗಾ ಕಲೆ ಮತ್ತು ವಾಣಿಜ್ಯ ಕಾಲೇಜು,**
**ನೆಲಮಂಗಲ-562 123,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ.**

ಪ್ರತಿಗಳು:

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56/
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4. ಬೆಂ. ವಿ. ಬೆಂಗಳೂರು-56
5) ಅಧೀಕ್ಷಕರು, ಕಾನ್ಫಿಡೆನ್ಶಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-56
6) ಐ.ಟಿ. ಕೋಆರ್ಡಿನೇಟರ್, ಯು.ಯು.ಸಿ.ಎಂ.ಎಸ್., ಬೆಂ.ವಿ.ವಿ, ಬೆಂಗಳೂರು-56.
7) ಸಹಾಯಕ ನಿರ್ದೇಶಕರು, ಅಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-1 [Aca-III:-1-2023-24]

TRUE TRANSLATION OF ENGLISH

BANGALORE UNIVERSITY

No. ACA-3/A3/SCAC/2023-24

Jnanabharathi
Bangalore – 560056.
Date: 12-09-2023

NOTIFICATION

Subject: Method of renewal of composition for the academic year 2023-24
Ref: 1. University notification no. ACA-3/A3/SCAC/2023-24 as on 15-05-2023
2. VC approval date 11-09-2023

Pursuant to the devolution of powers conferred by class 17th of article 59 of the Karnataka State Universities Act 2000. Bangalore University has renewed and continued the affiliation of the following course/courses conducted by Sri Siddaganga College of Arts and Commerce, Nelamangala for the year 2023-24 subject to the following conditions.

| Course | Subject, Discipline / Core Subject | Program based student rate |
|---|---|---|
| B.A | History<br>Economics<br>Political Science<br>Geography | Total 300 (three hundred) |
| B.COM | As Per Bangalore University Norms | Total 160 (one hundred and sixty) |
| Language : Kannada and English | | |

as per mentioned university notification of reference (1) the subject quota of the courses will be fixed as programme based student quota instead of discipline or core subject bases.

Sp. Note: The local LIC committee report is attached for the year 2023-24. The composition is updated only with the student quota fixed by the syndicate for the college. The college shall submit a follow of report within 15 days regarding the improvement of the deficiencies mentioned in the report of the local enquiry committee and rectification of the deficiencies otherwise the application for renewal of affiliation for the next academic year will not be accepted.

Conditions

1. The Government shall not grant aid to-the above mentioned course whatever may the clause in the guidelines pertaining to granting.aid to the colleges, and the course shall be treated as completely Un-aided course.
2. The college should scrupulously follow the conditions laid down by the Local Inspection Committee.
3. The college should scrupulously follow the Rules, Regulations of the University
4. The College should scrupulously follow the orders and Regulations of the Government issued time to time
5. The permanent affiliation is subject to the regular inspection.
6. The permanent is applicable only for the approved courses and languages only.
7. The college should take separate approved from the university with regard to the courses and languages which don't come under permanent affiliation.
8. The college should apply for the renewal of permanent affiliation after the completion of the permanent affiliation.
9. The College/Management should fix the University quota of 50% (Wherever it is applicable) as per the regulations and should collect the fee fixed by the University from time to time and should never collect more fee than the fee prescribed by the University.
10. The college should take steps to cancel the admissions of the students who are involved in unruly activities and causing sexual harassment to the women by considering them as Cognizable offence as per the verdict of the Supreme Court in Vishaka v/s Rajasthan Government. The college should also take stern measures against such students and the college should also constitute a committee to control such activities.
11. The college should appoint Teaching and Non Teaching Staff as per the Regulations of the Government
12. The Roster system fixed by the Government should be scrupulously followed at the time of recruitment for Teaching and Nonteaching Staff.
13. The Institution has to follow the rules and regulations laid down by the University and Government with regard to academic and administrative matters.
14. The Institution should run the course for the development of the students and the Principal/Management is required to treat the students cordially.
15. The Management of the College should not hold the marks card and other documents for not more than six months or till the admissions are approved (whichever is earlier).

16. The Management of the College should not cause trouble to the students who have applied for the transfer certificate and it can collect only the tuition fee for the remaining academic year/semester and should not collect any other fee.
17. The college should not collect capitation fee in any form. The Roster system has to be followed at the time of admission
18. The college should pay the prescribed annual fee to the University without fail.
19. The Principal should send the list of the eligible teachers to the respective chairman of the BOE failing which the affiliation granted will be cancelled.

By order
Sd/-
Registrar

To
Principal
Sri Siddaganga Arts and Commerce College,
Nelamangala – 562123
Bangalore Rural District.

Copies

1. Additional Chief Secretary to the Government, Department of Education ( University), M.S.Building, Bangalore
2. Director, Directorate for Collegiate Education, Bangalore-I
3. Registrar (Evaluation), Bangalore University, Bangalore-56.
4. Deputy Registrar, Assistant Registrar, Superintendent, Academic Section-1, Bangalore University, Bangalore.
5. Superintendent Confidential section, Exam section, BUB Bangalore – 56.
6. IT coordinator UUCMS BUB Bangalore – 56
7. Additional Director Statistical Department BUB Bangalore - 01

Duly attested by me

PRINCIPAL
SREE SIDDAGANGA COLLEGE OF ARTS & COMMERCE,
Nelamangala
Bangalore Rural Dist. 562 123.